\

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ದೀನದಯಾಳ್ ಉಪಾಧ್ಯಾಯ ಸೌಹಾರ್ದ ವಿದ್ಯಾರ್ಥಿನಿಲಯಗಳ ಜವಾಬ್ದಾರಿಯನ್ನು ಆಯಾಯ ಇಲಾಖೆಗೆ ವಹಿಸುವ ಕುರಿತು.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:ಸಕಇ 188 ಪಕವಿ 2022, ದಿನಾಂಕ:18-04-2022.
2. ಸರ್ಕಾರದ ಆದೇಶ ಸಂಖ್ಯೆ:ಸಕಇ 188 ಪಕವಿ 2022, ದಿನಾಂಕ:29-10-2022
3. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಏಕ ಕಡತ ಸಂಖ್ಯೆ: SWD/EDU/ED6/223/2022 (919105).

*****

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮಾಂಕ (1) ರ ಆದೇಶದಲ್ಲಿ 2022-23ನೇ ಆಯವ್ಯಯ ಭಾಷಣದ ಕಂಡಿಕೆ-154 ರನ್ವಯ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ, ಅಲ್ಪಸಂಖ್ಯಾತ ಮತ್ತು ಇತರೆ ವರ್ಗದ ಮಕ್ಕಳಲ್ಲಿ ಉನ್ನತ ವಿದ್ಯಾಭ್ಯಾಸವನ್ನು ಪ್ರೋತ್ಸಾಹಿಸಲು, ಮೊಟ್ಟ ಮೊದಲ ಬಾರಿಗೆ "ದೀನದಯಾಳ್ ಉಪಾಧ್ಯಾಯ ಸೌಹಾರ್ದ ವಿದ್ಯಾರ್ಥಿ ನಿಲಯ" ಯೋಜನೆಯಡಿ ರಾಜ್ಯದ ಶೈಕ್ಷಣಿಕ ಕೇಂದ್ರಗಳಾದ ಬೆಳಗಾವಿ, ಹುಬ್ಬಳ್ಳಿ-ಧಾರವಾಡ, ಕಲಬುರಗಿ, ಮಂಗಳೂರು ಮತ್ತು ಮೈಸೂರಿನಲ್ಲಿ ತಲಾ 1,000 ಸಾಮರ್ಥ್ಯದ ಬಹುಮಹಡಿಯ ವಿದ್ಯಾರ್ಥಿ ನಿಲಯ ಸಮುಚ್ಚಯಗಳನ್ನು ರೂ.250.00 ಕೋಟಿಗಳ ಮೊತ್ತದಲ್ಲಿ ಲೋಕೋಪಯೋಗಿ ಇಲಾಖೆಯಿಂದ ನಿರ್ವಹಿಸುವ ಕಾಮಗಾರಿಗೆ ಸಮಾಜ ಕಲ್ಯಾಣ ಇಲಾಖೆಯಿಂದ ಲೆಕ್ಕಶೀರ್ಷಿಕೆ:4225-01-277-2-03 ರಡಿಯಲ್ಲಿ ರೂ.63.00 ಕೋಟಿ ಮತ್ತು 4225-02-277-2-03 ರಡಿಯಲ್ಲಿ ರೂ.27.00 ಕೋಟಿ ಒಟ್ಟು ರೂ.90.00 ಕೋಟಿಗಳನ್ನು ಲೋಕೋಪಯೋಗಿ ಇಲಾಖೆಗೆ Deposit Cost Contribution ಮಾದರಿಯಲ್ಲಿ ಠೇವಣಿ ಮಾಡಲು, ಬಿಡುಗಡೆಗೊಳಿಸಲು ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (2) ರಲ್ಲಿ 2022-23 ನೇ ಸಾಲಿನ ಆಯವ್ಯಯ ಘೋಷಣೆಯ ಕಂಡಿಕೆ-154 ರನ್ವಯ ಮೊದಲ ಹಂತದಲ್ಲಿ 200 ಸಂಖ್ಯಾಬಲದ 05 ದೀನದಯಾಳ್ ಉಪಾಧ್ಯಾಯ ಸೌಹಾರ್ದ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ಅಗತ್ಯವಿರುವ ವಿವಿಧ ವೃಂದದ 45 ಹುದ್ದೆಗಳನ್ನು ಸೃಜಿಸಲು ಮಂಜೂರಾತಿ ನೀಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (3) ರಲ್ಲಿ ದಿನಾಂಕ:18-11-2022 ರಂದು ನಡೆದ ಸಭೆಯಲ್ಲಿ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಸೂಚಿಸಿದಂತೆ, ದೀನದಯಾಳ್ ಉಪಾಧ್ಯಾಯ ಸೌಹಾರ್ದ ವಿದ್ಯಾರ್ಥಿ ನಿಲಯಗಳನ್ನು ಈ ಕೆಳಕಂಡಂತೆ ಆಯಾಯ ಇಲಾಖೆಗಳಿಗೆ ವರ್ಗಾಯಿಸಬಹುದಾಗಿದೆ ಎಂದು ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

1. ಕಲಬುರಗಿ ಮತ್ತು ಧಾರವಾಡ - ಸಮಾಜ ಕಲ್ಯಾಣ ಇಲಾಖೆ.
2. ಮಂಗಳೂರು ಮತ್ತು ಬೆಳಗಾವಿ - ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.
3. ಮೈಸೂರು - ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ (ಜಂಟಿಯಾಗಿ)

ಮೇಲಿನ ಎಲ್ಲಾ ಅಂಶಗಳನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಸಕಇ 188 ಪಕವಿ 2022, ಬೆಂಗಳೂರು**
**ದಿನಾಂಕ: 29-12-2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿನ ಆಯವ್ಯಯ ಘೋಷಣೆಯ ಕಂಡಿಕೆ-154 ರನ್ವಯ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ, ಅಲ್ಪಸಂಖ್ಯಾತ ಮತ್ತು ಇತರೆ ವರ್ಗದ ಮಕ್ಕಳಲ್ಲಿ ಉನ್ನತ ವಿದ್ಯಾಭ್ಯಾಸವನ್ನು ಪ್ರೋತ್ಸಾಹಿಸಲು ಪ್ರಾರಂಭಿಸಿರುವ ದೀನದಯಾಳ್ ಉಪಾಧ್ಯಾಯ ಸೌಹಾರ್ದ ವಿದ್ಯಾರ್ಥಿ ನಿಲಯಗಳ ಜವಾಬ್ದಾರಿಯನ್ನು ಈ ಕೆಳಕಂಡ ಇಲಾಖೆಗಳಿಗೆ ವಹಿಸಿ ಆದೇಶಿಸಿದೆ.

1. ಕಲಬುರಗಿ ಮತ್ತು ಧಾರವಾಡ - ಸಮಾಜ ಕಲ್ಯಾಣ ಇಲಾಖೆ.
2. ಮಂಗಳೂರು ಮತ್ತು ಬೆಳಗಾವಿ - ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.
3. ಮೈಸೂರು - ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ (ಜಂಟಿಯಾಗಿ)

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಡಾ: ಪ್ರಜ್ಞಾ ಅಮ್ಮೆಂಬಳ)
ಸರ್ಕಾರದ ಉಪ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ:-**

1. ಮಹಾಲೇಖಪಾಲರು, (ಎ&ಇ, ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.

-----3

3. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು.
5. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
6. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
7. ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಬೆಂಗಳೂರು.
8. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು.
9. ಕಲ್ಯಾಣ ಕೇಂದ್ರ, 24/7 helpdesk, ಸಮಾಜ ಕಲ್ಯಾಣ ಇಲಾಖೆ, ಯವನಿಕ ಆವರಣ, ನೃಪತುಂಗ ರಸ್ತೆ, ಡಾ|| ಬಿ.ಆರ್ ಅಂಬೇಡ್ಕರ್ ವೀಧಿ, ಬೆಂಗಳೂರು.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**<u>ಪ್ರತಿ ಮಾಹಿತಿಗಾಗಿ:-</u>**

1. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ-1, ಸಮಾಜ ಕಲ್ಯಾಣ ಇಲಾಖೆ ರವರ ಆಪ್ತ ಸಹಾಯಕರು, ವಿಕಾಸಸೌಧ.

*****